# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ:ತು.ವಿ:ಶೈ.ವಿ:ಪಿ.ಜಿ:2025-26/2310 ದಿನಾಂಕ:27.10.2025

## ಸುತ್ತೋಲೆ

ವಿಷಯ: **PG Diploma ಕೋರ್ಸ್‌ಗಳ ವಿದ್ಯಾರ್ಥಿಗಳ ವಿದ್ಯಾರ್ಥಿವೇತನದ ಕುರಿತು.**

ಉಲ್ಲೇಖ:1. ಈ ಕಚೇರಿ ಪತ್ರ ಸಂಖ್ಯೆ:ತುವಿ:ಪಿಜಿ:2025-26/923 ದಿನಾಂಕ:11.07.2025

2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಪತ್ರ ದಿನಾಂಕ:03.09.2025

3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:24.10.2025

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(01) ಪತ್ರದಲ್ಲಿ ವಿಶ್ವವಿದ್ಯಾನಿಲಯದ ಪಿಜಿ ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡುವಂತೆ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರನ್ನು ಕೋರಲಾಗಿತ್ತು.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(02) ರ ಪತ್ರದಲ್ಲಿ ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರು PG Diploma Certificate Course ಗಳು ಒಂದು ವರ್ಷದ ಕೋರ್ಸುಗಳಾಗಿರುತ್ತವೆ. ಪದವಿ, ಸ್ನಾತಕೋತ್ತರ ಪದವಿ ಹಾಗೂ PG Diploma ಕೋರ್ಸುಗಳು ಕೇವಲ Eligibility ಕೋರ್ಸ್ ಆಗಿದ್ದು ಇದನ್ನು ಪದವಿ ಅಥವಾ ಸ್ನಾತಕೋತ್ತರ ಪದವಿ ಎಂದು ಪರಿಗಣಿಸಲು ಸಾಧ್ಯವಿಲ್ಲ ಹಾಗೂ ಪರಿಗಣಿಸಿರುವುದಿಲ್ಲ ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ ಭಾರತ ಸರ್ಕಾರದ ಮಾರ್ಗ ಸೂಚಿ(2020-21 ರಿಂದ 2025-26) ರ ಪ್ರಕಾರ ಸದರಿ ಕೋರ್ಸ್‌ಗಳಿಗೆ ವಿದ್ಯಾರ್ಥಿವೇತನವನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ ಎಂದು ತಿಳಿಸಿರುತ್ತಾರೆ.

ಸದರಿ ವಿಷಯವನ್ನು PG Diploma, Diploma ಹಾಗೂ Certificate ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಗಮನಕ್ಕೆ ತರಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಅಧ್ಯಕ್ಷರು / ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು. ವಿಶ್ವವಿದ್ಯಾನಿಲಯ, ತುಮಕೂರು
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು.

**ಪ್ರತಿಗಳು:**

1. ನೋಡಲ್ ಅಧಿಕಾರಿಗಳು, ಎಸ್.ಎಸ್.ಪಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ನೋಡಲ್ ಅಧಿಕಾರಿಗಳು, ಯು.ಯು.ಸಿ.ಎಂ.ಎಸ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
6. ಕಚೇರಿ ಪ್ರತಿ